ಮಂಗಳವಾರ 18.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 102
Digital Varthe Kannada Daily
Volume 01 - Issue 102
Tuesday 18.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ · ಕನ್ನಡ ದಿನಪತ್ರಿಕೆ

DIGITAL VARTHE
digitalvarthe@gmail.com
www.digitalvarthe.com

## ಚಾಲಕನ ನಿಯಂತ್ರಣ ತಪ್ಪಿ ಹಳ್ಳಕ್ಕೆ ಉರುಳಿದ KSRTC ಬಸ್



**ಉತ್ತರ ಕನ್ನಡ:** ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಸೂಳೆಮೂರ್ಕಿ ಕ್ರಾಸ್ ಬಳಿ ಧರ್ಮಸ್ಥಳಕ್ಕೆ ತೆರಳುತ್ತಿದ್ದ KSRTC ಬಸ್ ಚಾಲಕನ ನಿಯಂತ್ರಣ ತಪ್ಪಿ ಹಳ್ಳಕ್ಕೆ ಉರುಳಿದ ಘಟನೆ ನಡೆದಿದೆ. ಈ ದುರ್ಘಟನೆಯಲ್ಲಿ ಬಸ್‌ನಲ್ಲಿದ್ದ 29 ಪ್ರಯಾಣಿಕರು ಗಾಯಗೊಂಡಿದ್ದಾರೆ.

ಅದೃಷ್ಟವಶಾತ್ ಈ ದುರಂತದಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಬಾದಾಮಿ ಪ್ರದೇಶದಿಂದ ಧರ್ಮಸ್ಥಳಕ್ಕೆ ಹೊರಟಿದ್ದ ಕೆಎಸ್‌ಆರ್‌ಟಿಸಿ ಬಸ್ ಸೂಳೆಮೂರ್ಕಿ ಕ್ರಾಸ್ ಬಳಿ ತೀವ್ರ ವೇಗದಲ್ಲಿ ಸಾಗುತ್ತಿತ್ತು. ಚಾಲಕನ ನಿಯಂತ್ರಣ ತಪ್ಪಿ ಬಸ್ ರಸ್ತೆಯಿಂದ ಹಳ್ಳಕ್ಕೆ ಉರುಳಿ ಪಲ್ಟಿಯಾಗಿದೆ. ಲಕ್ಷ ದೀಪೋತ್ಸದ ಹಿನ್ನೆಲೆ ಅನೇಕ ಭಕ್ತರು ಬಾದಾಮಿಯಿಂದ ಧರ್ಮಸ್ಥಳಕ್ಕೆ ಸಾರಿಗೆ ಬಸ್ ಮೂಲಕ ಪ್ರಯಾಣಿಸುತ್ತಿದ್ದರು.. ಬಸ್‌ನಲ್ಲಿ ಮಕ್ಕಳು, ಮಹಿಳೆಯರು ಮತ್ತು ವೃದ್ಧರು ಸೇರಿದಂತೆ ವಿವಿಧ ವಯೋಮಾನದ ಪ್ರಯಾಣಿಕರು ಇದ್ದರು. ಉರುಳಿದ ಬಸ್ ಹಳ್ಳದಲ್ಲಿ ಸಿಲುಕಿ ಹಾಕಿಕೊಂಡಿದ್ದು, ಸ್ಥಳೀಯರು ಮತ್ತು ರಸ್ತೆಯಲ್ಲಿ ಸಾಗುತ್ತಿದ್ದ ಇತರ ವಾಹನಗಳ ಚಾಲಕರು ತಕ್ಷಣ ರಕ್ಷಣಾ ಕಾರ್ಯಕ್ಕೆ ಮುಂದಾಗಿದ್ದಾರೆ.

ಗಾಯಗೊಂಡ 29 ಪ್ರಯಾಣಿಕರಲ್ಲಿ ಕೆಲವರಿಗೆ ಸಣ್ಣಪುಟ್ಟ ಗಾಯಗಳಾದರೆ, ಕೆಲವರಿಗೆ ಗಂಭಿರ ಗಾಯಗಳಾಗಿವೆ. ತಲೆಗೆ, ಕೈಕಾಲುಗಳಿಗೆ ಮತ್ತು ಬೆನ್ನಿನ ಭಾಗಕ್ಕೆ ಗಾಯಗಳಾಗಿವೆ. ಸ್ಥಳೀಯರು ಮತ್ತು ಪೊಲೀಸರು ಆಗಮಿಸಿ ಗಾಯಾಳುಗಳನ್ನು ತಕ್ಷಣ ಹೊನ್ನಾವರ ಸರಕಾರಿ ಆಸ್ಪತ್ರೆಗೆ ಸಾಗಿಸಿದ್ದಾರೆ. ಆಸ್ಪತ್ರೆಯಲ್ಲಿ ವೈದ್ಯಕೀಯ ತಂಡ ತುರ್ತು ಚಿಕಿತ್ಸೆ ನೀಡಲಾಗಿತ್ತಿದೆ. ಕೆಲವು ಗಂಭೀರ ಗಾಯಗೊಂಡವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಕಾರವಾರ ಅಥವಾ ಮಂಗಳೂರಿನ ಆಸ್ಪತ್ರೆಗಳಿಗೆ ಸ್ಥಳಾಂತರಿಸುವ ಸಾಧ್ಯತೆಯಿದೆ.

## ಧೂಮ್ ಸಿನಿಮಾ ಪ್ರೇರಣೆ, ಶ್ರೀಮಂತರ ಮನೆಗಳೇ ಟಾರ್ಗೆಟ್



**ಬೆಳಗಾವಿ:** ಧೂಮ್-1 ಸಿನಿಮಾ ನಟ ಜಾನ್ ಅಬ್ರಾಹಂ ನಟನೆಯಿಂದ ಪ್ರೇರಣೆಗೊಂಡು 1.2 ಕೆಜಿ ಚಿನ್ನ ಕದ್ದ ಕಳ್ಳ ಅರೆಸ್ಟ್ ಆಗಿರುವ ಘಟನೆ ಬೆಳಗಾವಿಯಲ್ಲಿ ನಡೆದಿದೆ. ಮಹಾಂತೇಶ ನಗರದ ನಿವಾಸಿ ಸುರೇಶ ನಾಯಕ (32) ಬಂಧಿತ ಆರೋಪಿಯಾಗಿದ್ದು, ಕಾರು ಮತ್ತು ಬೈಕ್‌ಗಳು ಸೇರಿ ಒಂದೂವರೆ ಲಕ್ಷ ಹಣ ಮತ್ತು ಕೆಜಿಗಟ್ಟಲೆ ಚಿನ್ನವನ್ನು ಪೊಲೀಸರು ಜಪ್ತಿ ಮಾಡಿದ್ದಾರೆ.

ಹುಬ್ಬಳ್ಳಿಯ ಖ್ಯಾತ ವೈದ್ಯ ಡಾ.ಸುರೇಶ ದುಗ್ಗಾಣಿ ಸಹೋದರ ವಿಶ್ವನಾಥ ಅವರ ಹುಕ್ಕೇರಿ ತಾಲೂಕಿನ ಯಮಕನಮರಡಿ ಗ್ರಾಮದಲ್ಲಿನ ಮನೆಯಲ್ಲಿ ಕಳ್ಳತನ ನಡೆದಿದ್ದು, ಅಕ್ಟೋಬರ್ 23ರಂದು ಯಮಕನಮರಡಿ ಠಾಣೆಯಲ್ಲಿ ಈ ಬಗ್ಗೆ ಪ್ರಕರಣ ದಾಖಲಾಗಿತ್ತು. ಕುಟುಂಬ ಸಮೇತ ವಿಶ್ವನಾಥ ದುಗ್ಗಾಣಿ ಅಕ್ಟೋಬರ್ 16ರಂದು ಬೆಂಗಳೂರಿಗೆ ತೆರಳಿದ್ದರು. ಮನೆಯಲ್ಲಿ ಯಾರೂ ಇಲ್ಲದನ್ನು ಒಂದು ವಾರ ಗಮನಿಸಿದ್ದ ಆರೋಪಿ ಸುರೇಶ, ಅಕ್ಟೋಬರ್ 22ರ ರಾತ್ರಿ ವಿಶ್ವನಾಥ್ ಮನೆಗೆ ನುಗ್ಗಿ ಕೋಟ್ಯಂತರ ರೂ. ಮೌಲ್ಯದ ಚಿನ್ನ ಕದ್ದಿದ್ದ. ಒಂದೇ ಗಂಟೆಯಲ್ಲಿ ಮನೆಯಲ್ಲಿದ್ದ 1,250 ಗ್ರಾಂ ಚಿನ್ನ, ಎಂಟೂವರೆ ಕೆಜಿ ಬೆಳ್ಳಿ, ಒಂದೂವರೆ ಲಕ್ಷ ನಗದು ದೋಚಿ ಎಸ್ಕೇಪ್ ಆಗಿದ್ದ.

**ಪೊಲೀಸ್ ತನಿಖೆ ವೇಳೆ ಶಾಕಿಂಗ್ ವಿಚಾರ ಬೆಳಕಿಗೆ:** ಪ್ರಕರಣ ಬೆನ್ನುಬಿದ್ದ ಪೊಲೀಸರಿಗೆ ತನಿಖೆ ವೇಳೆ ಶಾಕಿಂಗ್ ವಿಚಾರ ಗೊತ್ತಾಗಿದೆ. ನಟ ಜಾನ್ ಅಬ್ರಾಹಂರ ಪಕ್ಕಾ ಅಭಿಮಾನಿ ಆಗಿರುವ ಸುರೇಶ ನಾಯಕ, ಕಳ್ಳತನಕ್ಕೆ ಪಲ್ಸರ್ ಬೈಕ್ ಬಳಸುತ್ತಿದ್ದ. ಶ್ರೀಮಂತರ ಮನೆಗೆ ಕನ್ನ ಹಾಕೋದು, ಐಷಾರಾಮಿ ಜೀವನ ನಡೆಸೋದೆ ಈತನ ಕಾಯಕವಾಗಿತ್ತು. ಕದ್ದ ಚಿನ್ನಾಭರಣ ಮಾರಿ ಬಂದ ಹಣದಿಂದ ಗೋವಾದಲ್ಲಿ ಮಜಾ ಮಾಡ್ತಿದ್ದ. ಮೊಬೈಲ್ ಕೂಡ ಹೊಂದಿರದ ಈತ, ಪೊಲೀಸರಿಗೆ ಚಳ್ಳೆ ಹಣ್ಣು ತಿನ್ನಿಸಲು ಬೈಕ್ ಮಾಡಿಫೈ ಮಾಡಿದ್ದ. ಹತ್ತು ನಿಮಿಷಕ್ಕೊಮ್ಮೆ ಬೈಕ್ ಲೈಟ್ ಕಲರ್ ಚೇಂಜ್ ಆಗುವ ರೀತಿ ಅದನ್ನು ರೆಡಿಮಾಡಿಸಿಕೊಂಡಿದ್ದ. 14 ದಿನಗಳ ಕಾಲ ರಾಷ್ಟ್ರೀಯ ಹೆದ್ದಾರಿಯ ಎಲ್ಲ ಸಿಸಿ ಕ್ಯಾಮರಾ ಪರಿಶೀಲನೆ ನಡೆಸಿರುವ ಪೊಲೀಸರು, ಸುರೇಶ ನಾಯಕ ಧರಿಸುವ ಶೂ, ಜಾಕೆಟ್ ಮತ್ತು ರೆಡ್ ಕ್ಯಾಪ್ ಆಧರಿಸಿ ಬಂಧಿಸಿದ್ದಾರೆ.

ಕದ್ದ ಚಿನ್ನವನ್ನು ಮಹಾರಾಷ್ಟ್ರದ ಕೊಲ್ಲಾಪುರಕ್ಕೆ ಮಾರಲೆಂದು ಸುರೇಶ್ ಹೊರಟಿದ್ದ ವೇಳೆ, ಮಹೀಂದ್ರಾ ಥಾರ್ ವಾಹನದಲ್ಲಿದ್ದ ಗೋಲ್ಡ್ ಸಮೇತ ಹಿಡಿದಿದ್ದಾರೆ. ಸುರೇಶ ನಾಯಕ ವಿರುದ್ಧ ಒಟ್ಟು 22 ಕಳ್ಳತನ ಪ್ರಕರಣಗಳು ದಾಖಲಾಗಿದ್ದು, ಥಾರ್ ವಾಹನ, ಕವಾಸಕಿ, ಪಲ್ಸರ್ ಬೈಕ್‌ಗಳು, ಒಂದೂವರೆ ಲಕ್ಷ ಹಣ ಹಾಗೂ ಕೆಜಿಗಟ್ಟಲೆ ಚಿನ್ನವನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

## ಶಾಂತಿ ನಗರದಲ್ಲಿ ವ್ಯಕ್ತಿಯ ಅಡ್ಡಗಟ್ಟಿ ದರೋಡೆ




**ಬೆಂಗಳೂರು:** ಶಾಂತಿನಗರದಲ್ಲಿ ದ್ವಿಚಕ್ರ ವಾಹನದಲ್ಲಿ ಬಂದ ಮೂವರು ವ್ಯಕ್ತಿಗಳು ಸ್ಕೂಟಿಯಲ್ಲಿ ಹೋಗುತ್ತಿದ್ದ ವ್ಯಕ್ತಿಯೊಬ್ಬರನ್ನು ಅಡ್ಡಗಟ್ಟಿ ಹಲ್ಲೆ ಮಾಡಿ, ದರೋಡೆ ಮಾಡುತ್ತಿರುವ ವಿಡಿಯೋವೊಂದು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ. ಬೆಂಗಳೂರು ಸೆಂಟ್ರಲ್ ಕ್ಷೇತ್ರದ ಸಂಸದ ಪಿಸಿ ಮೋಹನ್ ಕೂಡ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ವಿಡಿಯೋವನ್ನು ಹಂಚಿಕೊಂಡಿದ್ದು, ಬೆಂಗಳೂರು ನಗರ ಪೊಲೀಸರ ತಕ್ಷಣವೇ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

**ವಿಡಿಯೋದಲ್ಲಿ ಏನಿದೆ:** ಸಂಸದ ಮೋಹನ್ ಅವರು ಹಂಚಿಕೊಂಡಿರುವ ವಿಡಿಯೋದಲ್ಲಿ, ಸ್ಕೂಟಿಯಲ್ಲಿ ಹೋಗುತ್ತಿದ್ದ ವ್ಯಕ್ತಿಯೊಬ್ಬರನ್ನು ಮತ್ತೊಂದು ಸ್ಕೂಟಿಯಲ್ಲಿ ಬಂದ ಮೂವರು ಅಡ್ಡಗಟ್ಟಿದ್ದಾರೆ. ನಂತರ ಅವರ ಮೇಲೆ ಹಲ್ಲೆ ಮಾಡಿ ದರೋಡೆಗೆ ಯತ್ನಿಸಿರುವುದು ಕಂಡು ಬಂದಿದೆ. ವ್ಯಕ್ತಿಯ ಜೇಬನ್ನು ಪರಿಶೀಲಿಸುತ್ತಿರುವುದು ಕೂಡ ಕಾಣಿಸಿದೆ. ಸಂತ್ರಸ್ತ ತನ್ನನ್ನು ತಾನು ರಕ್ಷಿಸಿಕೊಳ್ಳಲು ಯತ್ನಿಸಿದ್ದಾರೆ. ಅಷ್ಟರಲ್ಲಿ ಮೂರು ಆಗಂತುಕರ ಪೈಕಿ ಒಬ್ಬ ಕೋಲಿನಿಂದ ಹೊಡೆದಿದ್ದಾನೆ. ದರೋಡೆ ಮಾಡಿದ ನಂತರ ಹಾಗಂತಕರ ಗ್ಯಾಂಗ್ ಅಲ್ಲಿಂದ ಪರಾರಿಯಾಗಿರುವುದು ವಿಡಿಯೋದಲ್ಲಿದೆ.

ವಿಡಿಯೋಗೆ ಅನೇಕ ಮಂದಿ ಪ್ರತಿಕ್ರಿಯಿಸಿದ್ದಾರೆ. ಒಬ್ಬರು, ಕರ್ನಾಟಕದಲ್ಲಿ ಸುರಕ್ಷತೆ ಇಲ್ಲ ಎಂದು ಬರೆದಿದ್ದಾರೆ. ಇನ್ನೊಬ್ಬರು 'ಗೂಂಡಾಗಿರಿ' ಎಂದು ಪ್ರತಿಕ್ರಿಯಿಸಿದ್ದಾರೆ. ಪೊಲೀಸ್ ಅಧಿಕಾರಿಗಳು ಈ ವಿಷಯಕ್ಕೆ ಸ್ಪಂದಿಸಿದ್ದಾರೆಯೇ ಅಥವಾ ಆರೋಪಿಗಳನ್ನು ಬಂಧಿಸಿದ್ದಾರೆಯೇ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ.

ಈ ಹಿಂದೆ ತಮ್ಮ ಕ್ಷೇತ್ರದಲ್ಲಿ ಮೂಲಸೌಕರ್ಯ ಮತ್ತು ನಾಗರಿಕ ಸಮಸ್ಯೆಗಳ ಕುರಿತು ಬೆಳಕು ಚೆಲ್ಲುವ ಮೂಲಕ ಸಂಸದ ಪಿ.ಸಿ. ಮೋಹನ್ ಗಮನ ಸೆಳೆದಿದ್ದರು. ಇದೀಗ ದರೋಡೆ ಪ್ರಕರಣದಲ್ಲಿ ನಗರ ಪೊಲೀಸರು ತಕ್ಷಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿ ಸಿದ್ದಾರೆ

## ಶಾಲೆಗೆ ತಡವಾಗಿ ಬಂದ ವಿದ್ಯಾರ್ಥಿನಿಗೆ 100 ಬಸ್ಕಿ: ವಾರದ ಬಳಿಕ ಪ್ರಾಣಬಿಟ್ಟ ಬಾಲಕಿ

**ಮುಂಬೈ:** ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯ ವಸಾಯಿ ತಾಲೂಕಿನ ಸತಿವಲಿ ಪ್ರದೇಶದಲ್ಲಿರುವ ಖಾಸಗಿ ಶಾಲೆಯಲ್ಲಿ 6ನೇ ತರಗತಿಯಲ್ಲಿ ಓದುತ್ತಿದ್ದ ವಿದ್ಯಾರ್ಥಿನಿಯೊಬ್ಬಳು ತಡವಾಗಿ ಬಂದಿದ್ದಕ್ಕಾಗಿ ಶಾಲೆಯಲ್ಲೇ ಅತಿಯಾದ ದೈಹಿಕ ಶಿಕ್ಷೆಗೆ ಒಳಗಾಗಿದ್ದಾಳೆ. ಶಿಕ್ಷೆಯ ಪರಿಣಾಮವಾಗಿ ಆರೋಗ್ಯ ಹದಗೆಟ್ಟು, ಸುಮಾರು ಒಂದು ವಾರದ ನಂತರ ಆಕೆ ಸಾವನ್ನಪ್ಪಿರುವ ಘಟನೆ ಸ್ಥಳೀಯವಾಗಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ. ಈ ಕುರಿತು ಪೊಲೀಸರು ಪ್ರಾಥಮಿಕ ತನಿಖೆಯನ್ನು ಆರಂಭಿಸಿದ್ದಾರೆ.

ಘಟನೆಯ ವಿವರವಂತೆ, ನವೆಂಬರ್ 8ರಂದು ಬಾಲಕಿ ಸೇರಿದಂತೆ ನಾಲ್ವರು ವಿದ್ಯಾರ್ಥಿಗಳು ಶಾಲೆಗೆ ತಡವಾಗಿ ಆಗಮಿಸಿದ್ದರು. ಇದಕ್ಕೆ ಶಿಕ್ಷೆಯಾಗಿ ಅವರಿಗೆ ತಲಾ 100 ಬಸ್ಕಿ ಹೊಡೆಯುವಂತೆ ಸೂಚಿಸಲಾಗಿದೆ ಎಂದು ಮಹಾರಾಷ್ಟ್ರ ನವನಿರ್ಮಾಣ ಸೇನೆ (ಎಂಎನ್‌ಎಸ್) ಸದಸ್ಯರು ಆರೋಪಿಸಿದ್ದಾರೆ. ಶಿಕ್ಷೆ ನೀಡುವಾಗ ಶಿಕ್ಷಕಿ ವಿದ್ಯಾರ್ಥಿಗಳ ಶಾಲಾ ಬ್ಯಾಗ್‌ಗಳನ್ನು ಅವರ ಬೆನ್ನಿಗೆ ಕಟ್ಟಿಕೊಂಡೇ ಬಸ್ಕಿ ಹೊಡೆಯಲು ಒತ್ತಾಯಿಸಿದ್ದಾಳೆ ಎಂದು ಆರೋಪಿಸಲಾಗಿದೆ.

ಶಿಕ್ಷೆಯ ನಂತರ ಬಾಲಕಿ ತೀವ್ರವಾದ ಕುತ್ತಿಗೆ ಮತ್ತು ಬೆನ್ನು ನೋವಿನಿಂದ ಬಳಲತೊಡಗಿದ್ದಳು. ಮನೆಗೆ ಬಂದ ತಕ್ಷಣವೂ ಏಳಲು, ನಡೆಯಲು ಕೂಡ ಕಷ್ಟವಾಗುತ್ತಿದ್ದುದನ್ನು ಪೋಷಕರು ಗಮನಿಸಿದ್ದಾರೆ. ಈ ಬಗ್ಗೆ ಮಾತನಾಡಿದ ಬಾಲಕಿಯ ತಾಯಿ, "ಅಮಾನವೀಯ ಶಿಕ್ಷೆಯಿಂದಲೇ ನನ್ನ ಮಗಳ ಆರೋಗ್ಯ ಹದಗೆಟ್ಟು ಸಾವಿಗೆ ದಾರಿ ಮಾಡಿಕೊಟ್ಟಿದೆ," ಎಂದು ಭಾವುಕರಾಗಿ ಹೇಳಿದ್ದಾರೆ.

ಬಾಲಕಿಗೆ ಮೊದಲೇ ಕೆಲವು ಆರೋಗ್ಯ ಸಮಸ್ಯೆಗಳಿದ್ದವು ಎನ್ನುವುದನ್ನು ಅಧಿಕಾರಿಗಳು ದೃಢಪಡಿಸಿದ್ದಾರೆ. ಆ ಸ್ಥಿತಿಯಲ್ಲಿ ಇಷ್ಟೊಂದು ಕಠಿಣ ಶಿಕ್ಷೆ ವಿಧಿಸಿರುವುದು ಸಾವಿಗೆ ಕಾರಣವಾಗಿದೆಯೇ ಎಂಬುದನ್ನು ತಿಳಿಯಲು ವೈದ್ಯಕೀಯ ತಂಡ ಹಾಗೂ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. "ಸಾವಿಗೆ ನಿಖರ ಕಾರಣ ಏನು ಎಂಬುದು ಸ್ಪಷ್ಟವಾಗಲು ಇನ್ನಷ್ಟು ವೈದ್ಯಕೀಯ ಪರೀಕ್ಷೆಗಳು ಅಗತ್ಯ," ಎಂದು ಬ್ಲಾಕ್ ಶಿಕ್ಷಣ ಅಧಿಕಾರಿ ಪಾಂಡುರಂಗ ಗಲಾಂ ಹೇಳಿದ್ದಾರೆ.

## ಕಾಲೇಜಲ್ಲಿ ಶೋಕಿಗಾಗಿ ಮನೆಗಳ್ಳತನಕ್ಕಿಳಿದಿದ್ದ ಏರೋಸ್ಪೇಸ್ ಎಂಜಿನಿಯರಿಂಗ್ ವಿದ್ಯಾರ್ಥಿಗಳು



**ಚಿಕ್ಕಬಳ್ಳಾಪುರ:** ನಗರದ ಕಾಲೇಜಿನಲ್ಲಿ ಓದುತ್ತಿದ್ದಾಗ ಶೋಕಿಗಾಗಿ ಮನೆಗಳಿಗೆ ದಾಳಿ ನಡೆಸಿ ಕಳ್ಳತನ ಮಾಡುತ್ತಿದ್ದ ಇಬ್ಬರು ಏರೋಸ್ಪೇಸ್ ಎಂಜಿನಿಯರಿಂಗ್ ವಿದ್ಯಾರ್ಥಿಗಳನ್ನು ಚಿಕ್ಕಬಳ್ಳಾಪುರ ಪೊಲೀಸರ ತಂಡ ಪತ್ತೆಹಚ್ಚಿ ಬಂಧಿಸಿದೆ. ಇವರಿಬ್ಬರ ಕೃತ್ಯ ಸ್ಥಳೀಯರಲ್ಲಿ ಆಶ್ಚರ್ಯ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ.

ಬಂಧಿತರಾದ ಚೇತನ್ ಮತ್ತು ಅಭಿಷೇಕ್ ಇಬ್ಬರೂ ಬೆಂಗಳೂರಿನ ಪ್ರತಿಷ್ಠಿತ ಎಂಜಿನಿಯರಿಂಗ್ ಕಾಲೇಜಿನಲ್ಲಿ ಏರೋ ಸ್ಪೇಸ್ ಎಂಜಿನಿಯರಿಂಗ್ ವಿಭಾಗದಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಒಬ್ಬರು ಚಿಕ್ಕಬಳ್ಳಾಪುರ ನಗರದ ಚಾಮ ರಾಜಪೇಟೆಯ ನಿವಾಸಿ ಚೇತನ್, ಮತ್ತೊಬ್ಬ ಅಭಿಷೇಕ್ ಮಂಡ್ಯ ಜಿಲ್ಲೆಯ ಮೂಲದವರು. ಒಂದೇ ಕಾಲೇಜಿನಲ್ಲಿ ಓದುತ್ತಿರುವುದರಿಂದ ಇಬ್ಬರೂ ಸ್ನೇಹಿತರಾಗಿ, ಒಟ್ಟಾಗಿ ಸಮಯ ಕಳೆಯುತ್ತಿದ್ದರೆನ್ನಲಾಗಿದೆ.

ಪೊಲೀಸರ ತನಿಖೆಯ ಪ್ರಕಾರ, ಈ ಇಬ್ಬರಿಗೂ ಕಾಲೇಜಿನಲ್ಲಿ ಶೋಕಿ ಮಾಡೋ ಆಸೆ ಇದ್ದರೂ ಕೈಯಲ್ಲಿ ಹಣದ ಕೊರತೆ ಇತ್ತು. ಈ ಕಾರಣದಿಂದ ಆರ್ಥಿಕ ಲಾಭಕ್ಕಾಗಿ ಮನೆಗಳ್ಳತನಕ್ಕೆ ಇಳಿಯುವ ಯೋಜನೆ ರೂಪಿಸಿದ್ದಾರೆ. ಅದಕ್ಕಾಗಿ ಚೇತನ್‌ರ ಮನೆಯ ಪಕ್ಕದಲ್ಲೇ ಇರುವ ಎರಡು ಮನೆಗಳನ್ನು ಟಾರ್ಗೆಟ್ ಮಾಡಿಕೊಂಡು ಕೃತ್ಯ ಎಸಗಿದ್ದಾರೆ.

ಸರಿ ವೇಳೆ ಮನೆಯವರು ಇರದೇ ಇರುವುದನ್ನು ಗಮನಿಸಿ, ಮೊದಲು ಚಾಮರಾಜಪೇಟೆಯ ಶಿಕ್ಷಕಿ ವಿನುತಾ ಅವರ ಮನೆಯಲ್ಲಿ ಕೃತ್ಯ ನಡೆಸಿದ್ರು. ಮನೆಯ ಬಿರುವಿನಲ್ಲಿ ಇಟ್ಟುಕೊಂಡಿದ್ದ ಸುಮಾರು ₹6.25 ಲಕ್ಷ ಮೌಲ್ಯದ ಚಿನ್ನಾಭರಣಗಳನ್ನು ಕದ್ದೊಯ್ದಿದ್ದಾರೆ. ನಂತರ ಇದೇ ಪ್ರದೇಶದಲ್ಲಿರುವ ಶಾಂತಮ್ಮ ಅವರ ಮನೆಯಲ್ಲಿ ನುಗ್ಗಿ, ₹85 ಸಾವಿರ ನಗದು ಜೊತೆಗೆ ಚಿನ್ನಾಭರಣಗಳನ್ನು ದೋಚಿಕೊಂಡಿದ್ದಾರೆ.

ಕೃತ್ಯ ಮಾಡಿದ ನಂತರ ದುಡ್ಡು ಕೈಗೆ ಸಿಕ್ಕಿದ ಖುಷಿಯಲ್ಲಿ ಇಬ್ಬರೂ ಮೋಜು-ಮಸ್ತಿ ನಡೆಸಿದ್ದಾರೆ ಎಂಬುದನ್ನು ಪೊಲೀಸರು ತಿಳಿಸಿದ್ದಾರೆ. ಆದರೆ ಮನೆಯವರು ದೂರು ನೀಡಿದ ಬಳಿಕ ಚಿಕ್ಕಬಳ್ಳಾಪುರ ಟೌನ್ ಪೊಲೀಸ್ ಠಾಣೆಯ ಸಿಬ್ಬಂದಿ ತಕ್ಷಣ ತನಿಖೆ ಆರಂಭಿಸಿ, ಸುಳಿವುಗಳ ಆಧಾರದ ಮೇಲೆ ಇಬ್ಬರನ್ನೂ ಹಿಡಿದು ಜೈಲುಗಟ್ಟಿದ್ದಾರೆ. ಈ ಘಟನೆ ಉನ್ನತ ಶಿಕ್ಷಣ ಪಡೆಯುತ್ತಿರುವ ಯುವಕರು ಇಂತಹ ಮಾರ್ಗಗಳಿಗೆ ಜಾರಿರುವುದರಿಂದ, ಸಾಮಾಜಿಕ ಮಟ್ಟ ಚರ್ಚೆಗೆ ಕಾರಣವಾಗಿದೆ.

## ಸೀರೆ ವಿಚಾರಕ್ಕೆ ಜಗಳ; ಕೋಪದಲ್ಲಿ ವಧುವನ್ನು ಕೊಂದ ವರ



**ಗುಜರಾತ್:** ಸೀರೆ ಮತ್ತು ಹಣದ ವಿಚಾರಕ್ಕೆ ಉಂಟಾದ ವಾಗ್ವಾದ ಮದುವೆಯನ್ನೇ ದುರಂತಕ್ಕೆ ತಳ್ಳಿದ ಘಟನೆ ಗುಜರಾತ್‌ನ ಭಾವನಗರದಲ್ಲಿ ಬೆಳಕಿಗೆ ಬಂದಿದೆ. ಮದುವೆಗೆ ಕೇವಲ ಒಂದು ಗಂಟೆ ಬಾಕಿ ಇರುವಾಗಲೇ ವರ ತನ್ನ ವಧುವನ್ನೇ ಹತ್ಯೆ ಮಾಡಿದ ಭಯಾನಕ ಪ್ರಕರಣ ಸ್ಥಳೀಯರನ್ನು ಬೆಚ್ಚಿಬೀಳಿಸಿದೆ.

ಪ್ರಭುದಾಸ್ ಸರೋವರದ ಬಳಿಯ ಟೆಕ್ರಿ ಚೌಕ್ ಪ್ರದೇಶದಲ್ಲಿ ನಡೆದ ಈ ಘಟನೆಗೆ ಸಂಬಂಧಿಸಿ, ಹತ್ಯೆಯಾದ ಮಹಿಳೆ ಸೋನಿ ಹಿಮ್ಮತ್ ರಾಥೋಡ್ ಎಂದು ಪೊಲೀಸರು ತಿಳಿಸಿದ್ದಾರೆ. ಕೊಲೆ ಮಾಡಿದ ಆರೋಪಿ ಸಜನ್ ಬರಯ್ಯ, ಈಕೆಯೊಂದಿಗೆ ಸುಮಾರು ಒಂದೂವರೆ ವರ್ಷಗಳಿಂದ ಲಿವ್-ಇನ್ ಸಂಬಂಧದಲ್ಲಿ ವಾಸಿಸುತ್ತಿದ್ದನು.ಬ್ಬರು ಪರಸ್ಪರ ಒಪ್ಪಿಗೆ ಮೇರೆಗೆ ಮದುವೆಯಾಗಲು ನಿರ್ಧರಿಸಿದ್ದು, ನಿಶ್ಚಿತಾರ್ಥವೂ ಕಳೆದಿಗಾಗಲೇ ನೆರವೇರಿತ್ತು. ಶನಿವಾರ ಇಬ್ಬರೂ ಹಸೆಮಣೆ ಏರುವ ಎಲ್ಲಾ ಸಿದ್ಧತೆಗಳು ಮುಗಿದಿದ್ದರೂ ಅಂತಿಮ ಕ್ಷಣದಲ್ಲಿ ಈ ದುರಂತ ಸಂಭವಿಸಿದೆ.

ಪೊಲೀಸರ ಪ್ರಾಥಮಿಕ ತನಿಖೆಯ ಪ್ರಕಾರ, ಮದುವೆಯ ದಿನದಂದು ಕೇವಲ ಒಂದು ಗಂಟೆ ಮೊದಲು ಸೀರೆ ಮತ್ತು ಹಣಕ್ಕೆ ಸಂಬಂಧಿಸಿದ ವಿಚಾರದಲ್ಲಿ ಜೋಡಿಯ ನಡುವೆ ತೀವ್ರ ವಾಗ್ವಾದ ಉಂಟಾಗುತ್ತದೆ. ಕೋಪದ ಜ್ವಾಲೆಯಲ್ಲಿ ಸಜನ್, ಕಬ್ಬಿಣದ ಪೈಪ್‌ನಿಂದ ಸೋನಿಗೆ ಭಾರೀ ಹೊಡೆತ ನೀಡಿದ್ದಾನೆ. ಹೊಡೆತದ ನಂತರ ಆಕೆಯ ತಲೆಯನ್ನು ಬಲವಾಗಿ ಗೋಡೆಗೆ ಡಿಕ್ಕಿಹೊಡೆಸಿದ್ದು, ಗಂಭೀರ ಗಾಯಗಳಿಂದ ಸ್ಥಳದಲ್ಲೇ ಮೃತಪಟ್ಟಿದ್ದಾಳೆ ಎಂದು ತನಿಖಾ ಅಧಿಕಾರಿಗಳು ತಿಳಿಸಿದ್ದಾರೆ.

ಅಪರಾಧ ಎಸಗಿದ ನಂತರ ಸಜನ್ ಸ್ಥಳದಲ್ಲಿದ್ದ ವಸ್ತುಗಳನ್ನು ಧ್ವಂಸಮಾಡಿ ಪರಾರಿಯಾಗಿದ್ದಾನೆ. ಸ್ಥಳೀಯರಿಂದ ಮಾಹಿತಿ ಪಡೆದ ಪೊಲೀಸರು ತಕ್ಷಣ ಸ್ಥಳಕ್ಕೆ ಬಂದು ಘಟನೆ ನಡೆದ ಮನೆಯ ಪರಿಸ್ಥಿತಿ ಪರಿಶೀಲಿಸಿದ್ದಾರೆ. ಮದುವೆಗೆ ಮುನ್ನವೂ ಆರೋಪಿ ಸಜನ್ ನೆರೆಹೊರೆಯವರೊಂದಿಗೆ ಹಲವು ಬಾರಿ ಜಗಳ ಮಾಡಿಕೊಂಡಿದ್ದಾನೆಂಬ ಮಾಹಿತಿ ಹೊರಬಿದ್ದಿದ್ದು, ಆ ಬಗ್ಗೆ ಈಗಾಗಲೇ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು.

## 'ನಮಗೆ ಮನೆಯ ಮುಂದೆ ಆಟವಾಡಲು ಸಾಧ್ಯವಾಗುತ್ತಿಲ್ಲ'; ಪ್ರಧಾನಿಗೆ ಪತ್ರ ಬರೆದ 8 ನೇ ತರಗತಿ ಬಾಲಕ

**ಗದಗ:** ಜಿಲ್ಲೆಯ ಬೆಟಗೇರಿ ಗ್ರಾಮವು ಕಳೆದ ಹಲವು ವರ್ಷಗಳಿಂದ ಮೂಲಸೌಕರ್ಯಗಳ ಕೊರತೆಯೊಂದಿಗೆ ಬಾಧಿತವಾಗಿದೆ. ಹೀಗಿರಲೂ, ಸಮಸ್ಯೆಗಳ ಪರಿಹಾರಕ್ಕೆ ನಗರಸಭೆ ಮತ್ತು ಸಂಬಂಧಿತ ಇಲಾಖೆಗಳ ಮನಸ್ಸು ಸಂಪೂರ್ಣ ನಿರ್ಲಕ್ಷ್ಯದಿಂದಿರುವುದಾಗಿ ಗ್ರಾಮಸ್ಥರು ದೂರಿದ್ದಾರೆ. ಕಾಲಕಾಲಕ್ಕೆ ಅಧಿಕಾರಿಗಳಿಗೆ ಮನವಿ ಮಾಡಿದ್ದರೂ ಯಾವುದೇ ರೀತಿಯ ಬದಲಾವಣೆ ಕಂಡುಬರದ ಸ್ಥಿತಿ ಸ್ಥಳೀಯರಲ್ಲಿ ಆಕ್ರೋಶ ಹುಟ್ಟಿಸಿದೆ. ಇದೇ ಹಿನ್ನೆಲೆಯಲ್ಲಿ, ಗ್ರಾಮದ 8ನೇ ತರಗತಿಯ ವಿದ್ಯಾರ್ಥಿ ಸಾಯಿರಾಮ್ ಪ್ರಧಾನಮಂತ್ರಿ ನರೇಂದ್ರ ಮೋದಿಯವರಿಗೆ ನೇರವಾಗಿ ಪತ್ರ ಬರೆದು ಗಮನ ಸೆಳೆಯಲು ಮುಂದಾಗಿರುವುದು ಈಗ ಗ್ರಾಮದಲ್ಲಿ ಹಾಗೂ ಜಿಲ್ಲೆಯಲ್ಲಿ ಚರ್ಚೆಗೆ ಗ್ರಾಸವಾಗಿದೆ.

**ವರ್ಷಗಳ ಕಾಲ ಮುಂದುವರಿದ ಮೂಲಸೌಕರ್ಯದ ಸಂಕಷ್ಟ:** ಬೆಟಗೇರಿ ಗ್ರಾಮದಲ್ಲಿ ರಸ್ತೆ, ನೀರು ಮತ್ತು ಚರಂಡಿ ವ್ಯವಸ್ಥೆಯ ಕೊರತೆ ಹಲವು ದಶಕಗಳಿಂದ ಮುಂದುವರಿದಿದ್ದು, ಮಳೆಗಾಲ ಬಂದಾಗ ಪರಿಸ್ಥಿತಿ ಇನ್ನಷ್ಟು ಕಷ್ಟಕರವಾಗುತ್ತದೆ. ಮಳೆಬಿದ್ದ ಕೂಡಲೇ ರಸ್ತೆಗಳು ಕೆಸರು ಗದ್ದೆಗಳಂತೆ ಮಾರ್ಪಟ್ಟಿದ್ದು, ಗ್ರಾಮಸ್ಥರಿಗೆ ಸಂಚಾರ ನಡೆಸುವುದೇ ದೊಡ್ಡ ಸವಾಲಾಗಿದೆ. ಮಕ್ಕಳು ಶಾಲೆಗೆ ಹೋಗುವುದು, ಹಿರಿಯರು ಆಸ್ಪತ್ರೆಗೆ ತೆರಳುವುದು, ಮಹಿಳೆಯರು ದಿನನಿತ್ಯದ ಕೆಲಸಗಳನ್ನು ನಿರ್ವಹಿಸುವುದು ಈ ಎಲ್ಲವೂ ಕಷ್ಟದ ವಿಷಯವಾಗುತ್ತದೆ. ಮನೆಗಳ ಮುಂಭಾಗದಲ್ಲಿ ನೀರು ನಿಂತುಹೋಗುವುದು, ಚರಂಡಿ ನೀರು ರಸ್ತೆಯ ಮೇಲೆ ಹರಿಯುವುದು, ದುರ್ನಾತಿಗಳ ವ್ಯಾಪಕತೆ ಕೂಡಾ ಆರೋಗ್ಯ ಸಮಸ್ಯೆಗಳನ್ನು ಉಂಟುಮಾಡುತ್ತಿದೆ.

ಗ್ರಾಮಸ್ಥರು ಅನೇಕ ಬಾರಿ ಸ್ಥಳೀಯ ಜನಪ್ರತಿನಿಧಿಗಳಿಗೆ, ನಗರಸಭೆ ಸದಸ್ಯರಿಗೆ ಮತ್ತು ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ, ಪರಿಹಾರ ಎಂಬುದು ಕೇವಲ ಭರವಸೆಯ ಮಟ್ಟದಲ್ಲೇ ಉಳಿದಿದೆ. "20 ವರ್ಷಗಳಿಂದ ಇದೇ ರೀತಿ ನರಳುತ್ತಾ ಇದ್ದೇವೆ, ಆದರೆ ಅಭಿವೃದ್ಧಿಯೊಂದು ನಮ್ಮ ಬಾಗಿಲಿಗೆ ಬಂದಂತಿಲ್ಲ," ಎಂದು ಸ್ಥಳೀಯರು ಬೇಸರ ವ್ಯಕ್ತಪಡಿಸಿದ್ದಾರೆ.


**ಸಾಯಿರಾಮ್—ಗ್ರಾಮದ ಪರವಾಗಿ ಧ್ವನಿ ಎತ್ತಿದ ಬಾಲಕ:** ಈ ಸಮಸ್ಯೆಗಳ ನೈಜ ಭಾರವನ್ನು ಅನುಭವಿಸುತ್ತಿರುವ ಸಾಯಿರಾಮ್ ಎಂಬ 8ನೇ ತರಗತಿಯ ವಿದ್ಯಾರ್ಥಿ, ತನ್ನ ಮತ್ತು ಗ್ರಾಮದ ಸ್ಥಿತಿಯನ್ನು ಪ್ರಧಾನಿಗೆ ತಿಳಿಸಲು ತಾನೇ ಮುಂದೆ ಬರುತ್ತಾನೆ. ಸೇಂಟ್ ಜಾನ್ಸ್ ಶಾಲೆಯಲ್ಲಿ ಓದುತ್ತಿರುವ ಈ ಬಾಲಕ, ತನ್ನ ಪತ್ರದಲ್ಲಿ ತೀವ್ರ ಕಳವಳ ಮತ್ತು ನೋವನ್ನು ಸ್ಪಷ್ಟವಾಗಿ ಬರೆದಿದ್ದಾನೆ.

ಸಾಯಿರಾಮ್ ಪತ್ರದಲ್ಲಿ ಹೀಗೆ ಹೇಳಿಕೊಂಡಿದ್ದಾನೆ—"ನಮ್ಮ ಮನೆಯ ಮುಂಭಾಗದ ರಸ್ತೆ ಸಂಪೂರ್ಣ ಕೆಸರಿನಿಂದ ಕೂಡಿದೆ. ಮಳೆ ಬಂದಾಗ ಶಾಲೆಗೆ ಹೋಗುವುದೇ ಕಷ್ಟ. ಅನೇಕ ಬಾರಿ ಕೆಸರಲ್ಲಿ ಜಾರಿ ಬಿದ್ದಿದ್ದೇನೆ. ನಮ್ಮ ಊರಿಗೆ ಕುಡಿಯುವ ನೀರು ಕೂಡ ಸರಿಯಾದ ಸಮಯಕ್ಕೆ ಬರುವುದಿಲ್ಲ. ನೀರಿಗಾಗಿ ಗಂಟೆಗಟ್ಟಲೆ ಕಾದು ಕುಳಿತುಕೊಳ್ಳಬೇಕಾಗುತ್ತದೆ."



ಅಷ್ಟೇ ಅಲ್ಲದೆ, ರಸ್ತೆ ಮತ್ತು ನೀರಿನ ಸಮಸ್ಯೆಗಳ ಬಗ್ಗೆ ಗ್ರಾಮಸ್ಥರು ವರ್ಷಗಳಿಂದ ಮನವಿ ಮಾಡಿದ್ದರೂ ಕ್ರಮ ಕೈಗೊಳ್ಳದಿರುವುದನ್ನು ಉಲ್ಲೇಖಿಸಿ, ತಕ್ಷಣ ಪರಿಹಾರ ಒದಗಿಸುವಂತೆ ಪ್ರಧಾನಿಗೆ ವಿನಂತಿಸಿಕೊಂಡಿದ್ದಾನೆ. ಬಾಲಕನ ಈ ಸರಳವಾದ, ನಿಷ್ಠಾವಂತ ಪತ್ರವು ಸಾಮಾಜಿಕ ಜಾಲತಾಣಗಳಲ್ಲಿಯೂ ಈಗ ವೈರಲ್ ಆಗುತ್ತಿದೆ.

**ಗ್ರಾಮಸ್ಥರಲ್ಲಿ ಹೊಸ ಭರವಸೆ:** ಸಾಯಿರಾಮ್‌ನ ಈ ಪತ್ರ ಗ್ರಾಮಸ್ಥರಲ್ಲಿ ಹೊಸ ನಿರೀಕ್ಷೆಯನ್ನು ಹುಟ್ಟಿಸಿದೆ. ಪ್ರಧಾನಿಗೆ ಪತ್ರ ತಲುಪಿ, ಸಮಸ್ಯೆಗಳಿಗೆ ತಕ್ಷಣದ ಸ್ಪಂದನೆ ದೊರೆಯಬಹುದು ಎಂಬ ಭರವಸೆಯಲ್ಲಿ ಬೆಟಗೇರಿಯ ಜನರು ಇದ್ದಾರೆ. "ನಮ್ಮ ಮಕ್ಕಳು ಕೂಡ ಮುಂದೆ ಬಂದು ಹೀಗೆ ಕೇಳಿಕೊಳ್ಳಬೇಕಾದ ಪರಿಸ್ಥಿತಿ ಬಂದಿದೆ. ಈಗಾದರೂ ನಮ್ಮ ಊರಿನ ಅಭಿವೃದ್ಧಿ ನಡೆಯಲಿ," ಎಂದು ಹಿರಿಯರು ಆಶಿಸುತ್ತಿದ್ದಾರೆ.



ಗ್ರಾಮದ ಸಮಸ್ಯೆಗಳು ರಾಷ್ಟ್ರ ಮಟ್ಟದ ನಾಯಕರ ಗಮನಕ್ಕೆ ಬಂದಿರುವುದರಿಂದ, ಶೀಘ್ರದಲ್ಲೇ ಬೆಟಗೇರಿಯ ಗತಿಯನ್ನು ಬದಲಾಯಿಸುವ ಕ್ರಮಗಳು ನಡೆಯಬಹುದೆಂಬ ನಂಬಿಕೆಯಿದೆ. ಗ್ರಾಮಸ್ಥರು ಈಗ ಪ್ರಧಾನ ಕಚೇರಿಯಿಂದ ಬರುವ ಪ್ರತಿಕ್ರಿಯೆಯನ್ನು ಕಾತರದಿಂದ ಕಾಯುತ್ತಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ಸಮಾಜವಾದಿ ಪಕ್ಷ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯ ಡಬಲ್ ಎಂಜಿನ್ ಸರ್ಕಾರಗಳನ್ನು ಸೋಲಿಸಿತು: ಅಖಿಲೇಶ್ ಯಾದವ್



ಬೆಂಗಳೂರು: ಸಮಾಜವಾದಿ ಪಕ್ಷವು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯ ಡಬಲ್ ಎಂಜಿನ್ ಸರ್ಕಾರಗಳನ್ನು ಸೋಲಿಸಿತು ಎಂದು ಸಮಾಜವಾದಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ಶ್ರೀ ಅಖಿಲೇಶ್ ಯಾದವ್ ಅವರು ಹೇಳಿದ್ದಾರೆ.

ಅವರು ಶನಿವಾರ ಎರಡು ದಿನಗಳ ಭೇಟಿಗಾಗಿ ಬೆಂಗಳೂರಿಗೆ ಆಗಮಿಸಿದ ಶ್ರೀ ಅಖಿಲೇಶ್ ಯಾದವ್ ಜೀ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು ಬಿಜೆಪಿ ಊಹಿಸಲಾಗದ ರೀತಿಯಲ್ಲಿ ಲೋಕಸಭಾ ಚುನಾವಣೆಯಲ್ಲಿ ಸ್ಥಾನಗಳನ್ನು ಕಳೆದುಕೊಂಡಿತು. ಬಿಜೆಪಿ ಬಿಹಾರದಲ್ಲಿನ ತನ್ನ ಗೆಲುವನ್ನು ಉತ್ತರ ಪ್ರದೇಶದಲ್ಲಿ ಸಮಾಜವಾದಿ ಪಕ್ಷದ ಗೆಲುವಿನೊಂದಿಗೆ ಸಮೀಕರಿಸಲು ಸಾಧ್ಯವಿಲ್ಲ. ಬಿಜೆಪಿಯು ಸರ್ಕಾರಿ ಯಂತ್ರವನ್ನು ದುರುಪಯೋಗ ಪಡಿಸಿಕೊಳ್ಳುವ ಮೂಲಕ ಚುನಾವಣಾ ಫಲಿತಾಂಶಗಳನ್ನು ತನ್ನ ಪರವಾಗಿ ಕುಶಲತೆಯಿಂದ ನಿರ್ವಹಿಸುತ್ತದೆ ಎಂದು ಹೇಳಿದರು.

ಉತ್ತರ ಪ್ರದೇಶದಲ್ಲಿ ಬಿಜೆಪಿ ಸರ್ಕಾರಿ ಯಂತ್ರವನ್ನು ವ್ಯಾಪಕವಾಗಿ ದುರುಪಯೋಗ ಪಡಿಸಿಕೊಂಡಿದೆ. ಸಮಾಜವಾದಿ ಪಕ್ಷವು ವಿಧಾನಸಭೆ ಮತ್ತು ಲೋಕಸಭಾ ಚುನಾವಣೆಗಳಲ್ಲಿ ಸೋತಿತು ನಾವು ಸೋಲಿನಿಂದ ಪಾಠ ಕಲಿತಿದ್ದೇವೆ. 2019 ರಲ್ಲಿ ಸಮಾಜವಾದಿ ಪಕ್ಷವು ಕೇವಲ ಐದು ಲೋಕಸಭಾ ಸ್ಥಾನಗಳನ್ನು ಗೆದ್ದಿತು. 2022 ರಲ್ಲಿ, ಸಮಾಜವಾದಿ ಪಕ್ಷವು ವಿಧಾನಸಭಾ ಚುನಾವಣೆಯಲ್ಲಿ ಸರ್ಕಾರ ರಚಿಸಲು ವಿಫಲವಾಯಿತು, ಆದರೆ ಅದು ಬಿಜೆಪಿಗೆ ಬಲವಾಗಿ ಸವಾಲು ಹಾಕಿತು. 2024 ರ ಲೋಕಸಭಾ ಚುನಾವಣೆಯಲ್ಲಿ, ಸಮಾಜವಾದಿ ಪಕ್ಷವು ಬಿಜೆಪಿಯ ಡಬಲ್-ಎಂಜಿನ್ ಸರ್ಕಾರವನ್ನು ಸೋಲಿಸಿತು.

ಕರ್ನಾಟಕ ರಾಜ್ಯ ಅಧ್ಯಕ್ಷ ಎನ್ ಮಂಜಪ್ಪ ಮಾತನಾಡಿ ಬಿಹಾರ ವಿಧಾನಸಭಾ ಚುನಾವಣಾ ಫಲಿತಾಂಶಗಳ ಬಗ್ಗೆ, ಶ್ರೀ ಅಖಿಲೇಶ್ ಯಾದವ್ ಅವರು ಗೆಲುವು ಮತ್ತು ಸೋಲು ಎರಡೂ ಪಾಠಗಳನ್ನು ನೀಡುತ್ತವೆ ಬಿಹಾರ ಚುನಾವಣೆಯಲ್ಲಿ ಗೆದ್ದ ನಂತರ, ಬಿಜೆಪಿ ಸದಸ್ಯರು ತಾವು ಹೆಚ್ಚಿನ ಮಹಿಳಾ ಮತಗಳನ್ನು ಪಡೆದಿದ್ದೇವೆ ಎಂದು ಹೇಳಿಕೊಳ್ಳುತ್ತಿದ್ದಾರೆ. ಬಿಜೆಪಿ ಇದನ್ನು ಹೇಳಿಕೊಳ್ಳಬಹುದು, ಆದರೆ ಅದು ಪ್ರತಿ ಮಹಿಳೆಗೆ ಹತ್ತು ಸಾವಿರ ರೂಪಾಯಿಗಳನ್ನು ಯಾವಾಗ ನೀಡುತ್ತದೆ ಎಂದು ನಿರ್ದಿಷ್ಟಪಡಿಸುವುದಿಲ್ಲ ಎಂದು ಹೇಳಿದರು.

ಸಮಾಜವಾದಿ ಯುವ ಜನ ಸಭಾ ರಾಜ್ಯ ಅಧ್ಯಕ್ಷ ಆನಂದ್ ಸಿ ತಿರುಮಲ ಮಾತನಾಡಿ ಮಹಿಳೆಯರು ಮತ್ತು ಯುವಕರಿಗೆ ಘನತೆಯ ಜೀವನ ಮತ್ತು ಉದ್ಯೋಗಗಳನ್ನು ಒದಗಿಸಲು ಬಿಜೆಪಿ ಬಯಸುವುದಿಲ್ಲ ಇವತ್ತು ದೇಶದ ಲಕ್ಷಾಂತರ ವಿದ್ಯಾವಂತ ಯುವ ಜನತೆ ಪದವೀಧರ ರಾದರು ಸಹ ಅರ್ಹತೆಗೆ ಅನುಗುಣವಾಗಿ ಸರ್ಕಾರಿ ಉದ್ಯೋಗ ಸಿಗುತ್ತಿಲ್ಲ ಯುವ ಜನಾಂಗ ಬಲಿಷ್ಠ ಭಾರತ ನಿರ್ಮಾಣ ಮಾಡಲು ಸರ್ವರಿಗೂ ಸಮಾನ ಅವಕಾಶ ಸಿಗಬೇಕು ಆಗ ಮಾತ್ರ ದೇಶದ ಆರ್ಥಿಕವಾಗಿ ಬೆಳೆಯುತ್ತದೆ ಎಂದು ಹೇಳಿದರು.

ಸಮಾಜವಾದಿ ಪಕ್ಷದ ಲೋಕ ಸಭಾ ಸದಸ್ಯ ರಾಜೀವ್ ರಾಯ್, ಸಮಾಜವಾದಿ ಪಕ್ಷದ ರಾಜ್ಯ ಅಧ್ಯಕ್ಷ ಎನ್ ಮಂಜಪ್ಪ, ಗೌರವ ಅಧ್ಯಕ್ಷ ಎಸ್ ಜಿ ಮಾಠ್, ಪ್ರಧಾನ ಕಾರ್ಯದರ್ಶಿ ಜಯರಾಮ್ ರೆಡ್ಡಿ, ಸಮಾಜವಾದಿ ಯುವ ಜನ ಸಭಾ ಅಧ್ಯಕ್ಷ ಆನಂದ್ ಸಿ ತಿರುಮಲ, ಮಾಂತೇಶ ಪಾಟೀಲ್,ಪ್ರಶಾಂತ್ ಚಿತ್ರದುರ್ಗ, ಮಂಜುನಾಥ್ ರಾಜನಹಳ್ಳಿ, ಪ್ರತಿಭಾ, ಉಷಾ ರಾಣಿ, ಎಲ್ ರಂಗನಾಥ್, ಗೋವಿಂದ್ ರಾಜು, ವೇಣುಗೋಪಾಲ್, ಜಗದೀಶ್, ನಾಗರಾಜ್ ಇತರರು ಇದ್ದರು.

## ನಕಲಿ ಸ್ಕಿನ್ ಕ್ಲಿನಿಕ್, ಲಕ್ಷ ಲಕ್ಷ ದೋಚಿದ ಡಾಕ್ಟರ್




**ಕೃಷ್ಣರಾಜಪೇಟೆ** :ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಮಾಕವಳ್ಳಿ ಮತ್ತು ಕರೋಟಿ ಗ್ರಾಮದ ಗ್ರಾಮಸ್ಥರು ಸೋಮವಾರ ಶಾಂತಿಪೂರ್ಣ ಆದರೆ ತೀವ್ರ ಪ್ರತಿಭಟನೆಯನ್ನು ನಡೆಸಿ, ಉಚ್ಚ ನ್ಯಾಯಾಲಯದ ಸ್ಪಷ್ಟ ಆದೇಶವನ್ನು ಉಲ್ಲಂಘಿಸಿ ಪೌತಿಕತೆ ಮಾಡಿಕೊಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮಾಣಿಕನಹಳ್ಳಿ ಸರ್ವೇ ನಂ. 49ಕ್ಕೆ ಸಂಬಂಧಿಸಿದಂತೆ 16-02-2022ರ ಇಂಟಿಮೇಶನ್ ಆರ್ಡರ್ ಇದ್ದರೂ, ಕಾನೂನುಬಾಹಿರವಾಗಿ ಮಹಾಭಲೇಶ್ವರ ಶರ್ಮಾ ಬಿನ್ ಶ್ರೀಕಂಠಯ್ಯ ರವರಿಗೆ ಪೌತಿ ಖಾತೆ ಮಾಡಿಕೊಟ್ಟಿದ್ದಾರೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮಸ್ಥರ ಆಕ್ರೋಶ : ಪ್ರತಿಭಟನೆಯ ವೇಳೆ ಗ್ರಾಮಸ್ಥರು ತೀಕ್ಷ್ಣವಾದ ಪ್ರಶ್ನೆಗಳು ಮತ್ತು ಘೋಷಣೆಗಳ ಮೂಲಕ ಅಸಮಾಧಾನ ಹೊರಹಾಕಿದರು: ಉಚ್ಚ ನ್ಯಾಯಾಲಯದ ಆದೇಶವನ್ನೇ ಲೆಕ್ಕಿಸದೇ ಪೌತಿಕತೆ ಮಾಡಿಕೊಡೋದು ಇದು ಅಕ್ರಮ ಅಲ್ಲವೇ? ಕಾನೂನಿನ ಮೇಲೆ ನಂಬಿಕೆ ಇಟ್ಟು ಬಂದಿದ್ದೇವೆ… ಆದ್ರೆ ಅಧಿಕಾರಿಗಳ ನಡೆ ನೋಡಿ ನಾವು ಮೋಸಹೋದವರು! ಪ್ರಭಾವಿಗಳ ಒತ್ತಡಕ್ಕೆ ಒಳಗಾಗಿ ಆಡಳಿತ ಕೆಲಸ ಮಾಡೋದಾದರೆ ಸಾರ್ವಜನಿಕರ ಹಕ್ಕು ಎಲ್ಲಿದೆ? ಜನರ ಮಾತು ಕೇಳುವವರು ಯಾರೂ ಇಲ್ಲ ಆದೇಶ ಉಲ್ಲಂಘಿಸಿದವರ ಮಾತಿಗೆ ಮಾತ್ರ ತೂಕ ಕಾನೂನು ಎಲ್ಲರಿಗೂ ಒಂದೇ ಆಗಿರಬೇಕು ಕೆಲವರಿಗೆ ಮಾತ್ರ ಬೇರೆ ನಿಯಮನೇ? ನ್ಯಾಯಾಲಯ ಹೇಳಿದ್ದು ಒಂದು… ಅಧಿಕಾರಿಗಳು ಮಾಡಿದ್ದು ಮತ್ತೊಂದು ಇದು ಯಾವ ರಾಜ್ಯವ್ಯವಸ್ಥೆ? ಗ್ರಾಮಸ್ಥರು ಸ್ಪಷ್ಟ ಎಚ್ಚರಿಕೆ ನೀಡಿದರು, ನ್ಯಾಯ ಕೊಡದೆ ಅಕ್ರಮಕ್ಕೆ ಮನ್ನಣೆ ಕೊಟ್ಟರೆ ಹೋರಾಟ ಇನ್ನಷ್ಟು ತೀವ್ರಗೊಳ್ಳಲಿದೆ.

ಆಡಳಿತದ ಪ್ರತಿಕ್ರಿಯೆ: ಪ್ರತಿಭಟನಾ ಸ್ಥಳಕ್ಕೆ ಆಗಮಿಸಿದ ತಾಲೂಕು ದಂಡಾಧಿಕಾರಿಗಳು ಅಶೋಕ್ ರವರು 5 ದಿನಗಳೊಳಗೆ ವಿಷಯವನ್ನು ಪರಿಶೀಲಿಸಿ ಅಗತ್ಯ ಕ್ರಮ ಕೈಗೊಂಡು ಸರಿಪಡಿಸಲು ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದ ನಂತರ ಗ್ರಾಮಸ್ಥರು ತಾತ್ಕಾಲಿಕವಾಗಿ ಚಳುವಳಿಯನ್ನು ಹಿಂತೆಗೆದುಕೊಂಡರು.

ಪ್ರತಿಭಟನೆಯಲ್ಲಿ ಯೋಗೇಶ್, ರವಿ (ರೈತ ಸಂಘ), ನಾಗಣ್ಣ , ಯೋಗಮೂರ್ತಿ, ಸುರೇಶ್, ಮಂಜು, ಅಣ್ಣೇಗೌಡ ಮಂಜುನಾಥ್, ಕುಮಾರ್, ನಾಗೇಶ್ ಕೆ.ಎಚ್., ಜಯಣ್ಣ ಸೇರಿದಂತೆ ಹಿರಿಯರು, ಯುವಕರು, ಮಹಿಳೆಯರು ಸೇರಿ ದೊಡ್ಡ ಸಂಖ್ಯೆಯಲ್ಲಿ ಭಾಗವಹಿಸಿದರು.

ಗ್ರಾಮಸ್ಥರು ಸರ್ಕಾರಕ್ಕೆ ಮನವಿ ಮಾಡಿ, ಈ ಅಕ್ರಮಕ್ಕೆ ಕಾರಣರಾದ ಜವಾಬ್ದಾರ ಅಧಿಕಾರಿಗಳ ವಿರುದ್ಧ ತಕ್ಷಣದ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು , ಸರ್ವರಿಗೂ ಆತ್ಮೀಯ ಆಮಂತ್ರಣ**

# ನಿವೃತ್ತ ಡಿವೈಎಸ್ಪಿ ಪುತ್ರಿಗೆ ವರದಕ್ಷಿಣೆ ಕಿರುಕುಳ

ನೆಲಮಂಗಲ: ನಿವೃತ್ತ ಡಿವೈಎಸ್ಪಿ ಗೋವಿಂದರಾಜ್ ಅವರ ಪುತ್ರಿ ಅನಿತಾ ಅವರಿಗೆ ಪತಿ ಮತ್ತು ಮಾವ-ಅತ್ತೆಯರಿಂದ ವರದಕ್ಷಿಣೆ ಹಾಗೂ ಮಾನಸಿಕ ಕಿರುಕುಳ ನೀಡಲಾಗಿದೆ ಎಂಬ ಗಂಭೀರ ಆರೋಪಗಳು ಹೊರಬಿದ್ದಿದ್ದು, ಈ ಘಟನೆ ನೆಲಮಂಗಲ ತಾಲ್ಲೂಕಿನ ತಿಮ್ಮಪ್ಪನಪಾಳ್ಯದಲ್ಲಿ ಬೆಳಕಿಗೆ ಬಂದಿದೆ. ಇದರಿಂದಾಗಿ ಸ್ಥಳೀಯವಾಗಿ ಚರ್ಚೆಗೆ ಗ್ರಾಸವಾಗಿರುವ ಪ್ರಕರಣ ಇದೀಗ ಪೊಲೀಸರ ತನಿಖೆಗೆ ಒಳಪಟ್ಟಿದೆ.

ಅನಿತಾ ಮತ್ತು ವೈದ್ಯರಾಗಿರುವ ಡಾ. ಗೋವರ್ಧನರ ಮದುವೆ 2023ರ ನವೆಂಬರ್ 2ರಂದು ಅದ್ದೂರಿ ವೈಭವದಲ್ಲಿ ನಡೆದಿತ್ತು. ಮಗಳ ವಿವಾಹಕ್ಕಾಗಿ ನಿವೃತ್ತ ಪೊಲೀಸ್ ಅಧಿಕಾರಿ ಗೋವಿಂದರಾಜ್ ಲಕ್ಷಾಂತರ ರೂಪಾಯಿ ಖರ್ಚುಮಾಡಿ, ಅಪಾರ ಪ್ರಮಾಣದ ಚಿನ್ನಾಭರಣಗಳನ್ನು ನೀಡಿ, ಸಮಾರಂಭವನ್ನು ವೈಭವಶಾಲಿಯಾಗಿ ನೆರವೇರಿಸಿದ್ದರು ಎಂದು ಕುಟುಂಬದವರು ತಿಳಿಸಿದ್ದಾರೆ. ಆದರೆ ಮದುವೆಯಾದ ಕೇವಲ 15 ದಿನಗಳಲ್ಲೇ ಅನಿತಾ ತಮ್ಮ ಪತಿ ಮತ್ತು ಮಗಳ ಮನೆಯವರಿಂದ ಕಿರುಕುಳ ಅನುಭವಿಸಬೇಕಾಯಿತು ಎಂಬುದು ಆಕೆ ನೀಡಿದ ದೂರಿನಲ್ಲಿ ಉಲ್ಲೇಖವಾಗಿದೆ.

ಮದುವೆಯ ಕೆಲವೇ ದಿನಗಳಲ್ಲಿ ಪತಿ ಡಾ. ಗೋವರ್ಧನ ತಮ್ಮ ಸರ್ಕಾರಿ ಸೇವೆಯನ್ನು ಬಿಟ್ಟು ನರ್ಸಿಂಗ್ ಹೋಮ್ ತೆರೆಯುವ ಯೋಚನೆ ವ್ಯಕ್ತಪಡಿಸಿದ್ದಾರಂತೆ. ಇದಕ್ಕಾಗಿ ಅನಿತಾ ತಂದೆಯ ಆಸ್ತಿಯನ್ನು ತನ್ನ ಹೆಸರಿನಲ್ಲಿ ಬರೆಸಿಕೊಳ್ಳುವಂತೆ ಡಾ. ಗೋವರ್ಧನ ಒತ್ತಾಯ ಮಾಡುತ್ತಿದ್ದರೆಂದು ಅನಿತಾ ದೂರಿನಲ್ಲಿ ತಿಳಿಸಿದ್ದಾರೆ. ಈ ಕಾರಣಕ್ಕಾಗಿ ದಾಂಪತ್ಯದಲ್ಲಿ ವಾತಾವರಣ ಹದಗೆಟ್ಟಿದ್ದು , ಅನಿತಾದ ಮೇಲೆ ಮಾನಸಿಕ ಒತ್ತಡ ಹೆಚ್ಚಾಗಿತ್ತಂತೆ.

ಇದೇ ವೇಳೆ ಪತಿಯ ಮಾವ ಪ್ರೊ. ನಾಗರಾಜು ಕೂಡ ಅನಿತಾಗೆ ಬೇಜವಾಬ್ದಾರಿಯ ಮಾತುಗಳಿಂದ ಹಾಗೂ ನಡೆ-ನುಡಿಗಳಿಂದ ಮಾನಸಿಕ ಕಿರುಕುಳ ನೀಡುತ್ತಿದ್ದರೆಂದು ಆರೋಪಿಸಲಾಗಿದೆ. ಮದುವೆಯಾಗಿ ಹಲವು ವರ್ಷವಾಗಿದ್ದರೂ ದಂಪತಿಗೆ ಮಗುವಾಗದಿರುವ ಹಿನ್ನೆಲೆಯಲ್ಲಿ, ಪ್ರೊ. ನಾಗರಾಜು ಅನಿತಾಗೆ ದೂರವಾಣಿ ಮೂಲಕ ಲೈಂಗಿಕವಾಗಿ ಅಸಭ್ಯ ಹಾಗೂ ನೋವುಂಟುಮಾಡುವಂತಹ ಕಾಮೆಂಟ್ ಮಾಡಿದ್ದಾಗಿ ದೂರಿನಲ್ಲಿ ಉಲ್ಲೇಖಿಸಲಾಗಿದೆ. "ನನ್ನ ಮಗ ನಿನಗೆ ಲೈಂಗಿಕ ಕ್ರಿಯೆ ನಡೆಸಿದ್ದಾನಾ ಇಲ್ಲವಾ? ಇಲ್ಲ ಅಂದರೆ ನಾನು ಬರುತ್ತೇನೆ" ಎಂದು ಅನಿತಾಗೆ ಹೇಳಿರುವುದಾಗಿ ಗಂಭೀರ ಆರೋಪ ಮಾಡಿದ್ದಾರೆ.

ಅಷ್ಟೇ ಅಲ್ಲದೇ, ಮಾವ ಮನೆಗೆ ಬಂದಾಗ ಸೊಸೆಯೊಂದಿಗೆ ಅಸಭ್ಯವಾಗಿ ವರ್ತಿಸುತ್ತಿದ್ದರೆಂದು, "ಈ ಕಾಲದ ಹುಡುಗಿಯರಂತೆ ತುಂಡು ಬಟ್ಟೆ ಧರಿಸಬೇಕು" ಎಂಬ ರೀತಿಯಲ್ಲಿ ಅಸಂಗತ ಮಾತುಗಳನ್ನು ಆಡುತ್ತಿದ್ದರೆಂದು ಅನಿತಾ ದೂರಿನಲ್ಲಿ ತಿಳಿಸಿದ್ದಾರೆ. ಈ ಬಗ್ಗೆ ಅನಿತಾ ತಮ್ಮ ಅತ್ತೆ ಮತ್ತು ಗಂಡನಿಗೆ ತಿಳಿಸಿದಾಗ ಕೂಡ ಅವರು "ಒಂದೇ ಕುಟುಂಬದವರು… ಇಂಥದ್ದು ಆಗುತ್ತೆ, ಹೇಗಾದರೂ ಸಹಿಸಿಕೊಂಡು ಹೋಗು" ಎಂದು ನಿರ್ಲಕ್ಷ್ಯವಾಗಿ ಪ್ರತಿಕ್ರಿಯಿಸಿದರೆಂದು ದೂರಿನಲ್ಲಿ ಹೇಳಲಾಗಿದೆ.

ಈ ಎಲ್ಲ ಘಟನೆಗಳಿಂದ ಮನಸ್ಸಿಗೆ ದೊಡ್ಡ ಹೊಡೆತ ತಗುಲಿರುವ ಅನಿತಾ ಅಂತಿಮವಾಗಿ ನೆಲಮಂಗಲ ಪೊಲೀಸ್ ಠಾಣೆಗೆ ಧಾವಿಸಿ, ತಮ್ಮ ಪತಿ ಡಾ. ಗೋವರ್ಧನ, ಮಾವ ಪ್ರೊ. ನಾಗರಾಜ್ ಹಾಗೂ ಅತ್ತೆಯ ವಿರುದ್ಧ ಗಂಭೀರ ಆರೋಪಗಳನ್ನು ಮಾಡಿ ದೂರು ದಾಖಲಿಸಿದ್ದಾರೆ. ಪೊಲೀಸರು BNS ಕಾನೂನುಗಳ ಸೆಕ್ಷನ್ 84, 74, 75 ಹಾಗೂ 352 BNS 3 & 4 ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದು , ಈಗ ಪ್ರಕರಣ ಸಂಬಂಧ ನೆಲಮಂಗಲ ಪೊಲೀಸರು ಮುಂದಿನ ತನಿಖೆ ಕೈಗೊಂಡಿದ್ದಾರೆ.

## ಬಿಗ್ ಬಾಸ್ ಸ್ಪರ್ಧಿ ಗಿಲ್ಲಿ ನಟನ ವಿರುದ್ಧ ದೂರು

ಬಿಗ್ ಬಾಸ್ ಕನ್ನಡ 12 ಸ್ಪರ್ಧಿ ಗಿಲ್ಲಿ ನಟ ವಿರುದ್ಧ ಮಹಿಳಾ ಆಯೋಗಕ್ಕೆ ದೂರು ಸಲ್ಲಿಕೆಯಾಗಿದೆ. ರಿಷಾ ಅವರ ಬಟ್ಟೆಗಳನ್ನು ವಾಷ್‌ರೂಮ್‌ನಲ್ಲಿ ಇಟ್ಟ ಘಟನೆಗೆ ಹಾಗೂ ಮಹಿಳೆಯರ ಬಗ್ಗೆ ಅವಮಾನಕರ ರೀತಿಯಲ್ಲಿ ಮಾತನಾಡಿದ ಆರೋಪಕ್ಕೆ ಸಂಬಂಧಿಸಿದಂತೆ ಈ ದೂರು ನೀಡಲಾಗಿದೆ.



ದೂರು ಸ್ವೀಕರಿಸಿದ ನಂತರ ಮಹಿಳಾ ಆಯೋಗವು ಬಿಗ್ ಬಾಸ್ ಮನೆಯಿಂದ ಹೊರಬಂದಿರುವ ವಿಡಿಯೋ ಫೂಟೇಜ್‌ಗಳನ್ನು ಪರಿಶೀಲಿಸಿದೆ. ಪ್ರಾಥಮಿಕ ಪರಿಶೀಲನೆಯಲ್ಲಿ ಗಿಲ್ಲಿ ನಟ ತಪ್ಪಾಗಿ ವರ್ತಿಸಿದ ಬಗ್ಗೆ ನೇರ ಸಾಕ್ಷಿ ದೊರಕದ ಕಾರಣ, ಪ್ರಕರಣವನ್ನು ಆಯೋಗದ ಕಾನೂನು ವಿಭಾಗದ ಅಭಿಪ್ರಾಯಕ್ಕಾಗಿ ಮುಂದಕ್ಕೆ ಕಳುಹಿಸಲಾಗಿದೆ.

## ಮೊದಲ ವರ್ಷದ ಟೂರ್ನಿಯಲ್ಲಿ ಜಯಗಳಿಸಿದ ಪವರ್ ಹಿಟ್ಟರ್ಸ್






ನೆಲಮಂಗಲ: ಫ್ರೆಂಡ್ಸ್ ಕ್ರಿಕೆಟ್ ಕ್ಲಬ್, ನೆಲಮಂಗಲ ವತಿಯಿಂದ ನಡೆದ ಮೊದಲನೇ ವರ್ಷದ ಟೆನ್ನಿಸ್ ಬಾಲ್ ಕ್ರಿಕೆಟ್ ಟೂರ್ನಮೆಂಟ್ ಭರ್ಜರಿಯಾಗಿ ಜರುಗಿತು.

ಟೂರ್ನಮೆಂಟ್‌ನಲ್ಲಿ ಒಟ್ಟು ನಾಲ್ಕು ತಂಡಗಳು ಭಾಗವಹಿಸಿದ್ದವು. ಈ ಪಂದ್ಯಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಪವರ್ ಹಿಟ್ಟರ್ಸ್ ತಂಡ ಪ್ರಥಮ ಬಹುಮಾನವನ್ನು ತಮ್ಮದಾಗಿಸಿಕೊಂಡಿದೆ. ಪವರ್ ಹಿಟ್ಟರ್ಸ್ ತಂಡವು ನಾಯಕ ಕಿಶೋರ್ ಅವರ ಶಕ್ತಿಯುತ ನೇತೃತ್ವದಲ್ಲಿ ಆಡಿತು. ರವಿ ಎಂಬ ಐಕಾನ್ ಆಲ್ ರೌಂಡರ್, ದರ್ಶನ್ ಎಂಬ ಐಕಾನ್ ಬಲಗೈ ಬ್ಯಾಟ್ಸ್ಮನ್, ರಘು ಆಲ್‌ರೌಂಡರ್, ಸಂಪತ್, ಪ್ರದೀಪ್, ರಮೇಶ್, ಅಂಜನ್, ಷಡಕ್ಷರಿ, ಅಂಕಿತ್, ಗೌತಮ್ ಸೇರಿದಂತೆ ಎಲ್ಲಾ ಆಟಗಾರರ ಉತ್ತಮ ಸಂಯೋಜಿತ ಆಟ ತಂಡಕ್ಕೆ ಗೆಲುವನ್ನು ತಂದುಕೊಟ್ಟಿತು.

ಫ್ರೆಂಡ್ಸ್ ಕ್ರಿಕೆಟ್ ಕ್ಲಬ್‌ನಲ್ಲಿ ವಿವಿಧ ಇಲಾಖೆಗಳ ಆಟಗಾರರು ಪ್ರತಿದಿನ ಬೆಳಿಗ್ಗೆ ಹವ್ಯಾಸಕ್ಕಾಗಿ ಕ್ರಿಕೆಟ್ ಆಡುವ ಪದ್ಧತಿ ಹಲವು ವರ್ಷಗಳಿಂದ ಮುಂದುವರಿದಿದೆ. ಆರಂಭದಲ್ಲಿ ಕೇವಲ ಐದು ಮಂದಿ ಆಟಗಾರರೊಂದಿಗೆ ಆರಂಭವಾದ ಈ ತಂಡ ಈಗ 60ಕ್ಕೂ ಹೆಚ್ಚು ಆಟಗಾರರ ಸಮೂಹವಾಗಿ ಬೆಳೆದಿದ್ದು , ದೊಡ್ಡ ಮಟ್ಟದ ತಂಡಗಳು ನಿರ್ಮಾಣವಾಗುವ ಮಟ್ಟಿಗೆ ಕ್ರಿಕೆಟ್ ಚಟುವಟಿಕೆ ವಿಸ್ತರಿಸಿದೆ.

ಮುಂದಿನ ದಿನಗಳಲ್ಲಿ ಪ್ರತಿ ವರ್ಷ ಅಥವಾ ಆರು ತಿಂಗಳಿಗೊಮ್ಮೆ ಇದೇ ರೀತಿಯ ಟೂರ್ನಮೆಂಟ್‌ಗಳನ್ನು ಆಯೋಜಿಸುವ ಯೋಜನೆ ಹೊಂದಿರುವುದಾಗಿ ಪವರ್ ಹಿಟ್ಟರ್ಸ್ ತಂಡದ ನಾಯಕ ಹಾಗೂ ಮಾಲೀಕ ಕಿಶೋರ್ ತಿಳಿಸಿದ್ದಾರೆ. ಟೂರ್ನಮೆಂಟ್ ಯಶಸ್ವಿಯಾಗಿ ಸಾಗುವಂತೆ ಉತ್ತಮ ವ್ಯವಸ್ಥೆ ಮಾಡಿದ ಆಯೋಜಕರಾದ ಸಂಪತ್, ರಾಜೀವ್ ಮತ್ತು ಮಂಜು ಅವರ ಪರಿಶ್ರಮವನ್ನು ಕಿಶೋರ್ ಅಭಿನಂದಿಸಿದ್ದಾರೆ.

## ತಮಿಳುನಾಡಿನಲ್ಲಿ ಸಿಎಂ ಎಂ.ಕೆ ಸ್ಟಾಲಿನ್ ಸೇರಿದಂತೆ ಅನೇಕ ಗಣ್ಯರಿಗೆ ಬಾಂಬ್ ಬೆದರಿಕೆ


ಚೆನ್ನೈ: ತಮಿಳುನಾಡಿನಲ್ಲಿ ಸೆಲೆಬ್ರಿಟಿಗಳು ಮತ್ತು ರಾಜಕೀಯ ಗಣ್ಯರ ಮೇಲೆ ಬಾಂಬ್ ಬೆದರಿಕೆ ಕರೆಗಳು ಮುಂದುವರಿದಿದೆ. ಭಾನುವಾರ ರಾತ್ರಿ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ನಟ ಅಜಿತ್ ಕುಮಾರ್, ಅರವಿಂದ್ ಸ್ವಾಮಿ ಮತ್ತು ನಟಿ ಖುಷ್ಬು ಅವರ ನಿವಾಸಗಳನ್ನು ಗುರಿಯನ್ನಾಗಿಸಿಕೊಂಡು ಅಪರಿಚಿತ ಮೂಲಗಳಿಂದ ಬಾಂಬ್ ಬೆದರಿಕೆ ಪತ್ರಗಳು ಮತ್ತು ಇಮೇಲ್‌ಗಳು ಕಳುಹಿಸಲಾಗಿದೆ. ಈ ಸಂಬಂಧ ಡಿಜಿಪಿ ಕಚೇರಿಗೆ ಬಂದಿರುವ ಎಚ್ಚರಿಕೆ ಮೇಲ್ ಹಿನ್ನೆಲೆಯಲ್ಲಿ ಪೊಲೀಸರು ತಕ್ಷಣವೇ ಎಲ್ಲಾ ನಾಲ್ಕು ಸ್ಥಳಗಳಲ್ಲೂ ಶೋಧ ಕಾರ್ಯಾಚರಣೆ ನಡೆಸಿದ್ದಾರೆ.

ಪೊಲೀಸರ ಪ್ರಾಥಮಿಕ ತಪಾಸಣೆಯಲ್ಲಿ ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗದಿದ್ದರೂ, ಬೆದರಿಕೆ ಸಂದೇಶಗಳ ಸರಣಿ ಮುಂದುವರಿಯುತ್ತಿರುವ ಹಿನ್ನೆಲೆಯಲ್ಲಿ ಕಾನೂನು ರಕ್ಷಕ ಪಡೆಗಳು ತೀವ್ರ ಎಚ್ಚರಿಕೆಯಿಂದಿವೆ. ಸಿಎಂ ನಿವಾಸ ಸೇರಿದಂತೆ ಎಲ್ಲ ಗಣ್ಯರ ಮನೆಗಳ ಸುತ್ತಮುತ್ತ ಕಾವಲು ಹೆಚ್ಚಿಸಿ, ಬಾಂಬ್ ನಿಷ್ಕ್ರೀಯ ದಳ (BDDS) ಹಾಗೂ ಶ್ವಾನ ದಳಗಳಿಂದ ಸಮಗ್ರ ತಪಾಸಣೆ ನಡೆಸಲಾಗಿದೆ.

ಅಜಿತ್ ಮನೆಗೆ ಮತ್ತೊಮ್ಮೆ ಬೆದರಿಕೆ - ಮತ್ತೆ ಹುಸಿ ಕರೆ: ಕಳೆದ ವಾರವೂ ಚೆನ್ನೈನಲ್ಲಿರುವ ನಟ ಅಜಿತ್ ಕುಮಾರ್ ಅವರ ನಿವಾಸಕ್ಕೆ ಇದೇ ರೀತಿಯ ಬಾಂಬ್ ಬೆದರಿಕೆ ಕರೆ ಬಂದಿತ್ತು. ಅಪರಿಚಿತ ವ್ಯಕ್ತಿ ನೀಡಿದ್ದ ಮಾಹಿತಿ ಆಧರಿಸಿ ಅಧಿಕಾರಿಗಳು ತಕ್ಷಣವೇ ಶೋಧ ಪ್ರಕ್ರಿಯೆ ಆರಂಭಿಸಿ, ಪೂರ್ವ ಕರಾವಳಿ ರಸ್ತೆಯಲ್ಲಿರುವ (ECR) ಅಜಿತ್ ಅವರ ಮನೆಗೆ ಬಾಂಬ್ ಸ್ಕ್ವಾಡ್ ಕಳುಹಿಸಿದ್ದರು. ಆದರೆ ಇದೊಂದು ಇನ್ನೊಂದು ಹುಸಿ ಬೆದರಿಕೆ ಎಂದು ದೃಢಪಟ್ಟಿತ್ತು. ಪೊಲೀಸ್ ಮೂಲಗಳು ಈಗಾಗಲೇ ಈ ಕರೆಗಳನ್ನು ಮಾಡುತ್ತಿರುವ ಮೂಲವನ್ನು ಪತ್ತೆಹಚ್ಚಲು ಸೈಬರ್ ಕ್ರೈಂ ಅಧಿಕಾರಿಗಳು ತನಿಖೆ ವಿಸ್ತರಿಸಿದ್ದಾರೆ ಎಂದು ತಿಳಿಸಿವೆ.

ನಟ ವಿಜಯ್‌ಗೂ ಪದೇಪದೇ ಬೆದರಿಕೆ: ತಮಿಳ್ ಸಿನಿರಂಗದ ಸೂಪರ್‌ಸ್ಟಾರ್ ಮತ್ತು ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷದ ಅಧ್ಯಕ್ಷ ನಟ ವಿಜಯ್ ಅವರಿಗೂ ಕಾಲಕಾಲಕ್ಕೆ ಬೆದರಿಕೆ ಸಂದೇಶಗಳು ಬರುತ್ತಲೇ ಇವೆ. ಇತ್ತೀಚೆಗಷ್ಟೇ ಬೆಳಗ್ಗೆ 5:20ರ ಸುಮಾರಿಗೆ "ವಿಜಯ್ ಅವರ ನಿವಾಸದಲ್ಲಿ ಬಾಂಬ್ ಇಡಲಾಗಿದೆ" ಎಂದು ಚೆನ್ನೈ ಪೊಲೀಸ್ ನಿಯಂತ್ರಣ ಕೊಠಡಿಗೆ ಕರೆ ಬಂದಿತ್ತು. ತಕ್ಷಣವೇ ಮೂವರು ಬಾಂಬ್ ನಿಷ್ಕ್ರೀಯ ದಳದ ಸದಸ್ಯರು ಮತ್ತು ಸ್ನಿಫರ್ ನಾಯಿ ವಿಜಯ್ ಅವರ ಮನೆಗೆ ಧಾವಿಸಿತು. ಆದರೆ ಈ ಬಾರಿ ಕೂಡ ತೀವ್ರ ತಪಾಸಣೆ ನಂತರ ಇದೊಂದು ಹುಸಿ ಸಂದೇಶ ಎಂಬುದು ದೃಢಪಟ್ಟಿತು.

## ಕರ್ನಾಟಕದಲ್ಲಿ ಕೈಗೆಟುಕುವ ದರದಲ್ಲಿ AI ಕಂಪ್ಯೂಟರ್



ಬೆಂಗಳೂರು ಟೆಕ್ ಸಮ್ಮಿಟ್ 2025 ಇಂದು ಆರಂಭವಾಗಲಿದ್ದು , ಮುಂದಿನ ಮೂರು ದಿನಗಳ ಕಾಲ ನಡೆಯಲಿದೆ. ದೇಶದಲ್ಲಿ 10% ಗಿಂತ ಕಡಿಮೆ ಮನೆಗಳಿಗೆ ಮಾತ್ರ ಕಂಪ್ಯೂಟರ್ ಸೌಲಭ್ಯವಿದ್ದು , ಕರ್ನಾಟಕದಲ್ಲಿಯೂ ಕೇವಲ 15% ಮನೆಗಳಿಗೆ ಮಾತ್ರ ಕಂಪ್ಯೂಟರ್ ಲಭ್ಯವಿದೆ. ಇದರ ಪರಿಣಾಮವಾಗಿ ಸುಮಾರು 60% ಭಾರತೀಯ ವಿದ್ಯಾರ್ಥಿಗಳು ಆನ್‌ಲೈನ್ ಶಿಕ್ಷಣದಿಂದ ವಂಚಿತರಾಗುತ್ತಿದ್ದಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

ಭಾರತದ ಡಿಜಿಟಲ್ ಆರ್ಥಿಕತೆ ವೇಗವಾಗಿ ವಿಸ್ತರಿಸುತ್ತಿರುವ ಹಿನ್ನೆಲೆ ಹೆಚ್ಚು ಜನರಿಗೆ ಕೈಗೆಟಕುವ ದರದಲ್ಲಿ ಕಂಪ್ಯೂಟರ್ ತಲುಪಬೇಕು ಎಂಬ ಉದ್ದೇಶದಿಂದ KEO ಕಂಪ್ಯೂಟರ್ ಅನ್ನು ಇಂದು ಅಧಿಕೃತವಾಗಿ ಲಾಂಚ್ ಮಾಡಲಾಗುತ್ತಿದೆ. ಇದರ ಬೆಲೆಯನ್ನೂ ಇಂದು ಬಹಿರಂಗಪಡಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು ಬೆಂಗಳೂರು ಅಂತಾರಾಷ್ಟ್ರೀಯ ವಸ್ತುಪ್ರದರ್ಶನ ಕೇಂದ್ರದಲ್ಲಿ ಸಮ್ಮಿಟ್‌ಗೆ ಉದ್ಘಾಟನೆ ನೆರವೇರಿಸಲಿದ್ದಾರೆ. ಲಾಂಚ್ ನಂತರ Keonext.in ವೆಬ್‌ಸೈಟ್‌ನಲ್ಲಿ ಉಚಿತ ಬುಕಿಂಗ್ ಆರಂಭವಾಗಲಿದ್ದು , ಬುಕ್ಕಿಂಗ್ ಮಾಡಿದ ಎಲ್ಲರಿಗೂ ಎರಡು ತಿಂಗಳೊಳಗೆ ಕಂಪ್ಯೂಟರ್ ವಿತರಣೆ ಮಾಡುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.